# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1048 |
| ಸದಸ್ಯರ ಹೆಸರು | : | ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ |
| ಉತ್ತರಿಸುವ ದಿನಾಂಕ | : | 24-02-2023 |
| ಉತ್ತರಿಸುವ ಸಚಿವರು | : | ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2021-22ನೇ ಸಾಲಿನಲ್ಲಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಉದ್ಯಮಶೀಲತಾ ಅಭಿವೃದ್ಧಿ ಯೋಜನೆಯ ಮಂಡಳಿ ವಿವೇಚನಾ ಕೋಟಾದಡಿಯಲ್ಲಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; | 2021-22ನೇ ಸಾಲಿನ ಆಯವ್ಯಯದಲ್ಲಿ ಹಂಚಿಕೆ ಮಾಡಿದ ಅನುದಾನದಲ್ಲಿ ಮಂಡಳಿ ವಿವೇಚನಾ ಕೋಟಾದಡಿ ನಿಗದಿಪಡಿಸಿದ ಗುರಿಗೆ ಅನುಗುಣವಾಗಿ ಉದ್ಯಮಶೀಲತಾ ಅಭಿವೃದ್ಧಿ ಯೋಜನೆಯಡಿ 33 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ. |
| ಆ) | ಆಯ್ಕೆಯಾದ ಫಲಾನುಭವಿಗಳಲ್ಲಿ ಎಷ್ಟು ಜನ ಸೌಲಭ್ಯಗಳನ್ನು ಪಡೆದುಕೊಂಡಿದ್ದಾರೆ; ಎಷ್ಟು ಜನ ಫಲಾನುಭವಿಗಳು ಸೌಲಭ್ಯದಿಂದ ವಂಚಿತರಾಗಿದ್ದಾರೆ ವಿಳಂಬಕ್ಕೆ ಕಾರಣಗಳೇನು; ಅರ್ಹರಿಲ್ಲದ ಫಲಾನುಭವಿಗಳ ಸಂಖ್ಯೆ ಎಷ್ಟು ಅವರುಗಳ ಯಾವ ಯಾವ ಜಿಲ್ಲೆಗೆ ಸೇರಿರುತ್ತಾರೆ; | ಉದ್ಯಮಶೀಲತಾ ಅಭಿವೃದ್ಧಿ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಲ್ಲಿ 17 ಫಲಾನುಭವಿಗಳು ಸೌಲಭ್ಯ ಪಡೆದುಕೊಂಡಿದ್ದಾರೆ,<br><br>ಉದ್ಯಮಶೀಲತಾ ಅಭಿವೃದ್ಧಿ ಯೋಜನೆಯು ಬ್ಯಾಂಕ್ ಸಹಯೋಗದೊಂದಿಗೆ ಅನುಷ್ಠಾನಗೊಳಿಸುವ ಯೋಜನೆಯಾಗಿದ್ದು, ಸದರಿ ಯೋಜನೆಯಡಿ ಅನುಮೋದನೆ ನೀಡಲಾದ ಫಲಾಪೇಕ್ಷಿಗಳು ನಿಗಮದ ನಿಯಮಾನುಸಾರ ಸೌಲಭ್ಯ ಪಡೆಯಲು ಅರ್ಹರಿದ್ದಲ್ಲಿ ಸದರಿಯವರ ಪ್ರಸ್ತಾವನೆಯನ್ನು ಸೇವಾ ಕ್ಷೇತ್ರದಲ್ಲಿರುವ ಬ್ಯಾಂಕಿಗೆ ಸಾಲ ಮಂಜೂರಾತಿಗೆ ಕಳುಹಿಸಲಾಗುವುದು. ಬ್ಯಾಂಕ್‌ನಿಂದ ಸಾಲ ಮಂಜೂರಾದ ಫಲಾನುಭವಿಗಳಿಗೆ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುತ್ತಿದೆ. |
| ಇ) | ಅಧ್ಯಕ್ಷರ ಮೂಲಕ ಅರ್ಹರಿಲ್ಲದ ಫಲಾನುಭವಿಗಳ ಬದಲಾವಣೆಗೆ ಎಷ್ಟು ಪ್ರಸ್ತಾವನೆಗಳು ನಿಗಮಕ್ಕೆ ಸಲ್ಲಿಕೆಯಾಗಿವೆ, ಸದರಿ ಪ್ರಸ್ತಾವನೆಗಳು ಯಾವ ಹಂತದಲ್ಲಿವೆ ಅಧ್ಯಕ್ಷರಿಂದ ವ್ಯವಸ್ಥಾಪಕ ನಿರ್ದೇಶಕರಿಗೆ | ವಿವೇಚನಾ ಕೋಟಾದಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳ ಪಟ್ಟಿಯನ್ನು ಸಂಬಂಧಪಟ್ಟ ಜಿಲ್ಲೆಗಳಿಗೆ ಕಳುಹಿಸಿ ಜಿಲ್ಲಾ ವ್ಯವಸ್ಥಾಪಕರುಗಳ ಮೂಲಕ ನಿಗಮದ ನಿಯಮಗಳನ್ವಯ ದಾಖಲೆಗಳನ್ನು ಪರಿಶೀಲಿಸಿ, ಅರ್ಹರಿರುವ ಮತ್ತು ಫಲಾನುಭವಿಗಳು ಬ್ಯಾಂಕ್‌ಗಳಿಂದ ಸಾಲ ಮಂಜೂರಾತಿ ಪತ್ರವನ್ನು ಹಾಜರು ಪಡಿಸಿದ್ದಲ್ಲಿ ಅನುದಾನವನ್ನು ಬಿಡುಗಡೆ ಮಾಡಲು ಕ್ರಮವಹಿಸಲಾಗುವುದು. ಮುಂದುವರೆದು |

| | | |
|---|---|---|
| | ಸ್ವೀಕೃತವಾದ ಪ್ರಸ್ತಾವನೆಗಳು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು; ಯಾವ ಕಾಲಮಿತಿಯೊಳಗೆ ಬದಲಾವಣೆ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಿ ಫಲಾನುಭವಿಗಳಿಗೆ ಸೌಲಭ್ಯ ನೀಡಲಾಗುವುದು; | ಅನರ್ಹ ಫಲಾನುಭವಿಗಳ ಬದಲಿಗೆ ವಿವೇಚನಾ ಕೋಟಾದ ಆಯ್ಕೆ ಪ್ರಾಧಿಕಾರವಾದ ನಿಗಮದ ಅಧ್ಯಕ್ಷರ ಅನುಮೋದನೆಯೊಂದಿಗೆ ಬೇರೆ ಫಲಾನುಭವಿಗಳನ್ನು ಆಯ್ಕೆ ಮಾಡಲು ನಿಯಮಾನುಸಾರ ಕ್ರಮವಹಿಸಲಾಗುವುದು. |
| ಈ) | ಅಧ್ಯಕ್ಷರು ಹಾಗೂ ಪತ್ರದ ಮೂಲಕವೇ ಬದಲಾವಣೆ ಮಾಡಬೇಕೆ ಅಥವಾ ಮಾನ್ಯ ವಿಧಾನ ಸಭೆ/ಪರಿಷತ್ ಫಲಾನುಭವಿಗಳ ಮನವಿಗಳ ಮೇಲೆ ಬದಲಾವಣೆ ಮಾಡಲಾಗಿದೆಯೇ. ಬದಲಾವಣೆ ಮಾಡಲು ಅನುಸರಿಸಬೇಕಾದ ಮಾನದಂಡಗಳೇನು? (ಸಂಪೂರ್ಣವಾದ ಮಾಹಿತಿ ನೀಡುವುದು) | |

ಸಕಇ 12 ಎಸ್‌ಟಿಸಿ 2023

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು

Scanned with Oken Scanner
Scanned with O
Scanned with OKEN Scanner